ಕರ್ನಾಟಕ ವಿಧಾನ ಪರಿಷತ್ತು

1.	ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	567
2.	ಮಾನ್ಯ ಸದಸ್ಯರ ಹೆಸರು	ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು)
3.	ಉತ್ತರಿಸಬೇಕಾದ ದಿನಾಂಕ	16.09.2021
4.	ಉತ್ತರಿಸಬೇಕಾದವರು	ಕಾರ್ಮಿಕ ಸಚಿವರು

ಕ್ರ ಸಂ.	ಪ್ರಶ್ನೆ	ಉತ್ತರ
(ಅ)	ಕಲಬುರಗಿಯಲ್ಲಿ 1600 ಕೋಟಿ ರೂಪಾಯಿ ವೆಚ್ಚದಲ್ಲಿ ಬೃಹತ್ ನಿರ್ಮಾಣ ಇ.ಎಸ್.ಐ.ಸಿ. ಆಸ್ಪತ್ರೆಯಿದ್ದು, ಇದನ್ನು ಏಮ್ಸ್ (ಎ.ಐ.ಎಂ.ಎಸ್) ಗೆ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;	ಕಾರ್ಮಿಕರ ರಾಜ್ಯ ವಿಮಾ ನಿಗಮದ ಅಧೀನದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕಾರ್ಮಿಕರ ರಾಜ್ಯ ವಿಮಾ ನಿಗಮ ಆಸ್ಪತ್ರೆ, ಕಲಬುರಗಿಯನ್ನು ಏಮ್ಸ್ (ಎ.ಐ.ಐ.ಎಂ.ಎಸ್) ಮಾದರಿಯಲ್ಲಿ ಸ್ಥಾಪಿಸುವಂತೆ ಮಾನ್ಯ ಹಿಂದಿನ ಮುಖ್ಯ ಮಂತ್ರಿಯವರು ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ, ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಭೂ ವಿಜ್ಞಾನ ಸಚಿವರಿಗೆ ಪತ್ರ ಬರೆದಿರುತ್ತಾರೆ. ಇದಕ್ಕೆ ಹೆಚ್ಚುವರಿಯಾಗಿ ಬೇಕಾಗುವ 125 ಎಕರೆ ಜಮೀನನ್ನು ಎ.ಐ.ಎಂ.ಎಸ್., ನವದೆಹಲಿ ಇವರಿಂದ ಅನುಮತಿ ಬಂದ ನಂತರ ಮಂಜೂರು ಮಾಡಲಾಗುವುದು ಎಂದು ರಾಜ್ಯ ಉನ್ನತ ಶಿಕ್ಷಣ ಇಲಾಖೆಯು ತಿಳಿಸಿದ್ದು, ಅದರಂತೆ ಇಎಸ್‌ಐಸಿ ಆಸ್ಪತ್ರೆ, ಕಲಬುರಗಿಯನ್ನು ಏಮ್ಸ್ (ಎ.ಐ.ಐ.ಎಂ.ಎಸ್) ಮಾದರಿಯಲ್ಲಿ ಮೇಲ್ದರ್ಜೆಗೇರಿಸುವಂತೆ ಕೋರಿ ಡೈರೆಕ್ಟರ್ ಜನರಲ್, ಕಾರ್ಮಿಕರ ರಾಜ್ಯ ವಿಮಾ ನಿಗಮ, ನವದೆಹಲಿ ಇವರಿಗೆ ಪತ್ರ ಬರೆಯಲಾಗಿದೆ.
(ಆ)	ಹಾಗಿದ್ದಲ್ಲಿ, ರಾಜ್ಯ ಸರ್ಕಾರ ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಿದೆಯೇ; ಸಲ್ಲಿಸಲಾಗಿದ್ದಲ್ಲಿ ಕೇಂದ್ರ ಸರ್ಕಾರದಿಂದ ಬಂದ ಉತ್ತರವೇನು? (ವಿವರ ನೀಡುವುದು)	

ಕಾಇ 283 [illegible] ಎಸ್ [illegible] 2021

(ಅರಬೈಲ್ ಶಿವರಾಂ ಹೆಬ್ಬಾರ್)
ಕಾರ್ಮಿಕ ಸಚಿವರು